ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ನಾಪಂಡ ಕಾಡು ಬಳಿ ಸೇತುವೆ ನಿರ್ಮಾಣ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):-

242 (293) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಅವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ, ಮುಕ್ಕೋಡ್ಲು ಹೊಳೆಗೆ ಸೇತುವೆ ನಿರ್ಮಾಣವಾಗದಿರುವುದರಿಂದ, ಪ್ರಕೃತಿ ವಿಕೋಪ ಹಾಗೂ ಪ್ರವಾಹದ ಸಂದರ್ಭದಲ್ಲಿ ಆ ಭಾಗದ ಜನರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಯಾವ ಕಾಲಮಿತಿಯೊಳಗೆ, ಸದರಿ ಸೇತುವೆಯನ್ನು ನಿರ್ಮಾಣ ಮಾಡಲಾಗುವುದು?